# ಹಿರಿಯ ಸಿವಿಲ್ ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ, ಹರಪನಹಳ್ಳಿ

ಸಿ ಸಿ ನಂಬರ 1246/2023

| ಸಿಡಬ್ಲ್ಯೂ | 2 | ಪಿಡಬ್ಲ್ಯೂ | 1 |
|---|---|---|---|

ಸಾಕ್ಷಿದಾರರ ಹೆಸರು : ಧರ್ಮಪ್ಪ

ತಂದೆಯ ಹೆಸರು : ಗೋಣೆಪ್ಪ

ವಯಸ್ಸು : 45 ವರ್ಷ ಸಾಕ್ಷಿಗೆ ಪ್ರಮಾಣವಚನ ಬೋಧಿಸಲಾಯಿತು 27.03.2025

ಉದ್ಯೋಗ : ವ್ಯವಸಾಯ

ವಾಸ ಸ್ಥಳ : ಹುಣಸೆಹಳ್ಳಿ

**ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ:-**

ನನಗೆ ಆರೋಪಿತನ ಪರಿಚಯ ಇರುತ್ತದೆ. ಆರೋಪಿಯು ನಮ್ಮ ಊರಿನವನು ಆಗಿರುತ್ತಾನೆ. ಈಗ್ಗೆ 1 ವರ್ಷದ ಹಿಂದೆ ನಾನು ಕೆಲಸಕ್ಕೆ ಹೋಗುತ್ತಿರುವಾಗ ಪೋಲೀಸರು ನನ್ನನ್ನು ಕರೆದಿರುತ್ತಾರೆ. ಪೋಲೀಸರ ಕೋರಿಕೆಯ ಮೇರೆಗೆ ಒಂದು ದಾಖಲೆಗೆ ಸಹಿ ಮಾಡಿರುತ್ತೇನೆ. ಸದರಿ ದಾಖಲೆಯು ಮಹಜರ ಆಗಿದ್ದು ಅದನ್ನು ಈಗ ನಿ ಪಿ 1 ಎಂದು ಗುರುತಿಸಲಾಯಿತು. ಸಾಕ್ಷಿ ಸಹಿಯನ್ನು ನಿ ಪಿ 1(ಎ) ಎಂದು ಗುರುತಿಸಲಾಯಿತು.. ನಕಾಶೆ ನಿ ಪಿ 2 ಎಂದು, ಸಾಕ್ಷಿ ಸಹಿಯನ್ನು ನಿ ಪಿ 2(ಎ) ಎಂದು ಗುರುತಿಸಲಾಯಿತು. ನಿ ಪಿ 1 ಮತ್ತು ನಿ ಪಿ 2 ರಲ್ಲಿ ಏನ ಬರೆದಿರುತ್ತಾರೆಂದು ನನಗೆ ಗೊತ್ತಿರುವುದಿಲ್ಲ ಆ ದಿನ ಸ್ಥಳದಲ್ಲಿ ಪೋಲೀಸರು ಒಂದು ಪೋಟೋವನ್ನು ತೆಗೆದಿರುತ್ತಾರೆ. ಯಾವ ಕಾರಣಕ್ಕಾಗಿ ಪೋಟೋಗಳನ್ನು ತೆಗೆದಿರುತ್ತಾರೆಂದು ನನಗೆ ಗೊತ್ತಿರುವುದಿಲ್ಲ.

**(ಈ ವೇಳೆಯಲ್ಲಿ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಸದರಿ ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಅನುಮತಿ ಕೋರಿರುತ್ತಾರೆ. ಸದರಿ ಸಾಕ್ಷಿಯು ಪೋಲೀಸರಿಗೆ ಕೊಟ್ಟಿರುವುದಾಗಿ ಹೇಳಲಾದ ಹೇಳಿಕೆಯನ್ನು ಪರಿಶೀಲಿಸಲಾಯಿತು. ಅದರಲ್ಲಿರುವ ಸಂಗತಿಗಳಿಗೆ ವ್ಯತಿರಿಕ್ತವಾಗಿ ಸಾಕ್ಷಿದಾರರು ಪುರಾವೆ ಹೇಳಿರುವುದರಿಂದ ಇವರನ್ನು ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ನ್ಯಾಯಾಲಯವು ಸಹಾಯಕ ಸರ್ಕಾರಿ ಅಭಿಯೋಜಕರಿಗೆ ಪಾಟೀ ಸವಾಲು ಮಾಡಲು ಅನುಮತಿಯನ್ನು ಕಲ್ಪಿಸಲಾಗಿದೆ.)**

**ಪಾಟೀ ಸವಾಲು ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ-**

ದಿನಾಂಕ 11.04.2023 ರಂದು ನಿಚ್ಚಾಪುರದ ಗ್ರಾಮ ದಿಂದ ಓಬಳಾಪುರ ಗ್ರಾಮಕ್ಕೆ ಹೋಗುವ ಟಾರ್ ರಸ್ತೆ ಪಕ್ಕದಲ್ಲಿ ಇರುವ ಗಾಣಗೇರಿ ಪರಮೇಶಪ್ಪ ಮತ್ತು ಅಶ್ವತಪ್ಪ ಹೊಲಗಳ ಮಧ್ಯೆದಲ್ಲಿ ಇರುವ ಬಂಡಿ ಜಾಡು ರಸ್ತೆಯಲ್ಲಿ ನನ್ನ ಮತ್ತು ಚಾ ಸಾ 3 ರವರ ಸಮಕ್ಷಮ ಚಾ ಸಾ 18 ರವರು ಚಾ ಸಾ 1 ರವರು ತೋರಿಸಿದ ಸ್ಥಳದಲ್ಲಿ ಸಂಜೆ 4.30 ರಿಂದ 5.30 ರವರೆಗೆ ನಿ ಪಿ 1 ಮತ್ತು ನಿ ಪಿ 2 ರಂತೆ ಸ್ಥಳ ಪಂಚನಾಮೆ ಕಚ್ಚಾ ನಕಾಶೆಯನ್ನು

ಮಾಡಿರುತ್ತಾರೆ ಎಂದರೆ ಸರಿಯಲ್ಲ. ಅದೇ ಸಮಯದಲ್ಲೇಲ ನಾನು ಇರುವಂತಹ ಒಂದು ಫೋಟೋವನ್ನು ತೆಗೆದಿರುತ್ತಾರೆ ಎಂದರೆ ಗೊತ್ತಿಲ್ಲಾ. ದಿನಾಂಕ 03.05.2023 ರಂದು ಚಿಗಟೇರಿ ಪೋಲೀಸ ಠಾಣೆ ಯಲ್ಲಿ ನನ್ನ ಮತ್ತು ಚಾ ಸಾ 4 ರವರ ಸಮಕ್ಷಮ ಚಾ ಸಾ 18 ರವರು ಬೆಳಿಗ್ಗೆ 11 ರಿಂದ 12 ಗಂಟೆಯವರೆಗೆ ನಕಲಿ ಬಂಗಾರದ ಬಿಲ್ಲೆಗಳ ಜಪ್ತು ಪಂಚನಾಮೆಯನ್ನು ನಿ ಪಿ 3 ರಂತೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ಕಪ್ಪು ಬಣ್ಣದ ಪ್ಲಾಸ್ಟಿಕ್ 500 ರಿಂದ 550 ನಲಿ ಬಂಗಾರದ ಬಿಲ್ಲೆಗಳನ್ನು ಜಪ್ತುಪಡಿಸಿಕೊಂಡಿರುತ್ತಾರೆ ಎಂದರೆ ಗೊತ್ತಿಲ್ಲಾ. ನಿ ಪಿ 1 ರಿಂದ 3 ರಲ್ಲಿ ಬರೆದಿರುವ ಸಂಗತಿಗಳು ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು ಆರೋಪಿ ಪರ ಶ್ರೀ ಎನ್ ಎನ್ ವಕೀಲರಿಂದಃ- ಇಲ್ಲ</u>**

ಮರು ವಿಚಾರಣೆ ಇಲ್ಲಾಃ-

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತಲೇಖನದಂತೆ ಗಣಕೀಕೃತ ಗೊಳಿಸಲಾಯಿತು.) ಓ ಹೇ ಕೇ ಸರಿ ಇದೆ.

ಹಿರಿಯ ಸಿವಿಲ್ ಮತ್ತು ಜೆ ಎಂ ಎಫ್ ಸಿ
ನ್ಯಾಯಾಧೀಶರು, ಹರಪನಹಳ್ಳಿ.

# ಹಿರಿಯ ಸಿವಿಲ್ ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ, ಹರಪನಹಳ್ಳಿ

ಸಿ ಸಿ ನಂಬರ 1246/2023

| ಸಿಡಬ್ಲ್ಯೂ | 3 | ಪಿಡಬ್ಲ್ಯೂ | 2 |
|---|---|---|---|

ಸಾಕ್ಷಿದಾರರ ಹೆಸರು : ಪರಸಪ್ಪ

ತಂದೆಯ ಹೆಸರು : ಕೊಟ್ರೇಶಪ್ಪ

ವಯಸ್ಸು : 45 ವರ್ಷ ಸಾಕ್ಷಿಗೆ ಪ್ರಮಾಣವಚನ ಬೋಧಿಸಲಾಯಿತು 27.03.2025

ಉದ್ಯೋಗ : ವ್ಯವಸಾಯ

ವಾಸ ಸ್ಥಳ : ಹುಣಸೆಹಳ್ಳಿ

**ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ:-**

ನನಗೆ ಆರೋಪಿತನ ಪರಿಚಯ ಇರುತ್ತದೆ. ಆರೋಪಿಯು ನಮ್ಮ ಊರಿನವನು ಆಗಿರುತ್ತಾನೆ. ಈಗ್ಗೆ 1 ವರ್ಷದ ಹಿಂದೆ ನಾನು ಕೆಲಸಕ್ಕೆ ಹೋಗುತ್ತಿರುವಾಗ ಪೋಲೀಸರು ನನ್ನನ್ನು ಕರೆದಿರುತ್ತಾರೆ. ಪೋಲೀಸರ ಕೋರಿಕೆಯ ಮೇರೆಗೆ ಒಂದು ದಾಖಲೆಗೆ ಸಹಿ ಮಾಡಿರುತ್ತೇನೆ. ಸದರಿ ದಾಖಲೆಯು ಮಹಜರ ಆಗಿದ್ದು ಅದನ್ನು ಈಗ ನಿ ಪಿ 1 ಎಂದು ಗುರುತಿಸಲಾಯಿತು. ಸಾಕ್ಷಿ ಸಹಿಯನ್ನು ನಿ ಪಿ 1(ಬಿ) ಎಂದು ಗುರುತಿಸಲಾಯಿತು.. ನಕಾಶೆ ನಿ ಪಿ 2 ಎಂದು, ಸಾಕ್ಷಿ ಸಹಿಯನ್ನು ನಿ ಪಿ 2(ಬಿ) ಎಂದು ಗುರುತಿಸಲಾಯಿತು. ನಿ ಪಿ 1 ಮತ್ತು ನಿ ಪಿ 2 ರಲ್ಲಿ ಏನ ಬರೆದಿರುತ್ತಾರೆಂದು ನನಗೆ ಗೊತ್ತಿರುವುದಿಲ್ಲ ಆ ದಿನ ಸ್ಥಳದಲ್ಲಿ ಪೋಲೀಸರು ಒಂದು ಪೋಟೋವನ್ನು ತೆಗೆದಿರುತ್ತಾರೆ. ಯಾವ ಕಾರಣಕ್ಕಾಗಿ ಪೋಟೋಗಳನ್ನು ತೆಗೆದಿರುತ್ತಾರೆಂದು ನನಗೆ ಗೊತ್ತಿರುವುದಿಲ್ಲ.

**(ಈ ವೇಳೆಯಲ್ಲಿ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಸದರಿ ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಅನುಮತಿ ಕೋರಿರುತ್ತಾರೆ. ಸದರಿ ಸಾಕ್ಷಿಯು ಪೋಲೀಸರಿಗೆ ಕೊಟ್ಟಿರುವುದಾಗಿ ಹೇಳಲಾದ ಹೇಳಿಕೆಯನ್ನು ಪರಿಶೀಲಿಸಲಾಯಿತು. ಅದರಲ್ಲಿರುವ ಸಂಗತಿಗಳಿಗೆ ವ್ಯತಿರಿಕ್ತವಾಗಿ ಸಾಕ್ಷಿದಾರರು ಪುರಾವೆ ಹೇಳಿರುವುದರಿಂದ ಇವರನ್ನು ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ನ್ಯಾಯಾಲಯವು ಸಹಾಯಕ ಸರ್ಕಾರಿ ಅಭಿಯೋಜಕರಿಗೆ ಪಾಟೀ ಸವಾಲು ಮಾಡಲು ಅನುಮತಿಯನ್ನು ಕಲ್ಪಿಸಲಾಗಿದೆ.)**

**ಪಾಟೀ ಸವಾಲು ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ-**

ದಿನಾಂಕ 11.04.2023 ರಂದು ನಿಚ್ಚಾಪುರದ ಗ್ರಾಮ ದಿಂದ ಓಬಳಾಪುರ ಗ್ರಾಮಕ್ಕೆ ಹೋಗುವ ಟಾರ್ ರಸ್ತೆ ಪಕ್ಕದಲ್ಲಿ ಇರುವ ಗಾಣಗೇರಿ ಪರಮೇಶಪ್ಪ ಮತ್ತು ಅಶ್ವತಪ್ಪ ಹೊಲಗಳ ಮಧ್ಯೆದಲ್ಲಿ ಇರುವ ಬಂಡಿ ಜಾಡು ರಸ್ತೆಯಲ್ಲಿ ನನ್ನ ಮತ್ತು ಚಾ ಸಾ 2 ರವರ ಸಮಕ್ಷಮ ಚಾ ಸಾ 18 ರವರು ಚಾ ಸಾ 1 ರವರು ತೋರಿಸಿದ ಸ್ಥಳದಲ್ಲಿ ಸಂಜೆ 4.30 ರಿಂದ 5.30 ರವರೆಗೆ ನಿ ಪಿ 1 ಮತ್ತು ನಿ ಪಿ 2 ರಂತೆ ಸ್ಥಳ ಪಂಚನಾಮೆ ಕಚ್ಚಾ ನಕಾಶೆಯನ್ನು

ಮಾಡಿರುತ್ತಾರೆ ಎಂದರೆ ಸರಿಯಲ್ಲ. ಅದೇ ಸಮಯದಲ್ಲೇಲ ನಾನು ಇರುವಂತಹ ಒಂದು ಪೋಟೋವನ್ನು ತೆಗೆದಿರುತ್ತಾರೆ ಎಂದರೆ ಗೊತ್ತಿಲ್ಲಾ. ದಿನಾಂಕ 03.05.2023 ರಂದು ಚಿಗಟೇರಿ ಪೋಲೀಸ ಠಾಣೆ ಯಲ್ಲಿ ನನ್ನ ಮತ್ತು ಚಾ ಸಾ 4 ರವರ ಸಮಕ್ಷಮ ಚಾ ಸಾ 18 ರವರು ಬೆಳಿಗ್ಗೆ 11 ರಿಂದ 12 ಗಂಟೆಯವರೆಗೆ ನಕಲಿ ಬಂಗಾರದ ಬಿಲ್ಲೆಗಳ ಜಪ್ತು ಪಂಚನಾಮೆಯನ್ನು ನಿ ಪಿ 3 ರಂತೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ಕಪ್ಪು ಬಣ್ಣದ ಪ್ಲಾಸ್ಟಿಕ್ 500 ರಿಂದ 550 ನಲಿ ಬಂಗಾರದ ಬಿಲ್ಲೆಗಳನ್ನು ಜಪ್ತುಪಡಿಸಿಕೊಂಡಿರುತ್ತಾರೆ ಎಂದರೆ ಗೊತ್ತಿಲ್ಲಾ. ನಿ ಪಿ 1 ರಿಂದ 3 ರಲ್ಲಿ ಬರೆದಿರುವ ಸಂಗತಿಗಳು ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು ಆರೋಪಿ ಪರ ಶ್ರೀ ಎನ್ ಎನ್ ವಕೀಲರಿಂದಃ- ಇಲ್ಲ</u>**

ಮರು ವಿಚಾರಣೆ ಇಲ್ಲಾಃ-

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತಲೇಖನದಂತೆ ಗಣಕೀಕೃತ ಗೊಳಿಸಲಾಯಿತು.) ಓ ಹೇ ಕೇ ಸರಿ ಇದೆ.

ಹಿರಿಯ ಸಿವಿಲ್ ಮತ್ತು ಜೆ ಎಂ ಎಫ್ ಸಿ
ನ್ಯಾಯಾಧೀಶರು, ಹರಪನಹಳ್ಳಿ.